ಉ) ಬಂದಿಲ್ಲ. ಸುಂಕ ವಸೂಲಾತಿಯನ್ನು ಖಾಸಗಿಯವರಿಗೆ ಗುತ್ತಿಗೆ ಆಧಾರದ ಮೇಲೆ ನೀಡಲಾಗಿದೆ.

ಊ) ಅವ್ಯವಹಾರಗಳಾವುವೂ ಇಲ್ಲದಿರುವುದರಿಂದ ತನಿಖೆ ನಡೆಸುವ ಪ್ರಶ್ನೆಯೇ ಉದ್ಭವಿಸುವುದಿಲ್ಲ.

ಹುಬ್ಬಳ್ಳಿ ಪ್ರವಾಸಿ ಮಂದಿರ ಹಾಗೂ ಸರ್ಕ್ಯೂಟ್ ಹೌಸ್ ಬಗ್ಗೆ

೧೪೦೪ (೧೪೮೮) ಶ್ರೀ ಪಿ. ಸಿ. ಸಿದ್ದನಗೌಡರ (ಕಲಘಟಗಿ):- ಮಾನ್ಯ ಲೋಕೋಪಯೋಗಿ ಮಂತ್ರಿಗಳು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೇ;

ಅ) ಹುಬ್ಬಳ್ಳಿ ಪ್ರವಾಸಿ ಮಂದಿರ ಹಾಗೂ ಸರ್ಕ್ಯೂಟ್ ಹೌಸ್‌ನಲ್ಲಿರುವ ಕೊಠಡಿಗಳ ಸಂಖ್ಯೆ ಎಷ್ಟು?

ಆ) ಮುಖ್ಯ ಮಂತ್ರಿಗಳು ಹಾಗೂ ಮಂತ್ರಿಗಳು ಹುಬ್ಬಳ್ಳಿಗೆ ಬಂದಾಗ ಕೊಠಡಿಗಳು ಸಿಗದೆ ಧಾರವಾಡಕ್ಕೆ ಹೋಗುತ್ತಿರುವುದನ್ನು ಸರ್ಕಾರ ಗಮನಿಸಿದೆಯೇ?

ಇ) ಹಾಗಿದ್ದಲ್ಲಿ ಹುಬ್ಬಳ್ಳಿಯ ಪ್ರವಾಸಿ ಮಂದಿರ ಹಾಗೂ ಸರ್ಕ್ಯೂಟ್ ಹೌಸ್‌ಗಳಲ್ಲಿ ಈಗಿರುವ ಕೊಠಡಿಗಳ ಸಂಖ್ಯೆಯನ್ನು ಹೆಚ್ಚಿಸಲು ಸರ್ಕಾರ ಕ್ರಮ ಕೈಗೊಳ್ಳುತ್ತದೆಯೇ?

ಶ್ರೀ ಜಿ. ಪರಮೇಶ್ವರ ರೆಡ್ಡಿ (ಲೋಕೋಪಯೋಗಿ ಮಂತ್ರಿಗಳು):-

ಅ) ಕೊಠಡಿಗಳ ಒಟ್ಟು ಸಂಖ್ಯೆ ೨೨.

೧) ಪ್ರವಾಸಿ ಮಂದಿರದಲ್ಲಿ ೮ ಕೋಣೆಗಳು

೨) ಸರ್ಕ್ಯೂಟ್‌ಹೌಸ್‌ನಲ್ಲಿ ೯ ಕೋಣೆಗಳು

೩) ನಿರೀಕ್ಷಣಾ ಮಂದಿರದಲ್ಲಿ ೫ ಕೋಣೆಗಳು

ಒಟ್ಟು ೨೨

ಆ) ಹೌದು. ಕೆಲವೇ ಸಂದರ್ಭದಲ್ಲಿ ಮಾತ್ರ ಕೊಠಡಿಗಳು ಲಭ್ಯವಿಲ್ಲದ ಕಾರಣ ಧಾರವಾಡಕ್ಕೆ ಹೋಗಿರುವುದು ಉಂಟು.

ಇ) ಹುಬ್ಬಳ್ಳಿ ಪ್ರವಾಸಿ ಮಂದಿರದಲ್ಲಿ ೨.೦೦ ಲಕ್ಷ ರೂ. ಗಳ ಅಂದಾಜಿನಲ್ಲಿ ಹೆಚ್ಚು ಕೊಠಡಿಗಳನ್ನು ನಿರ್ಮಿಸಲು ಹಾಗೂ ಹುಬ್ಬಳ್ಳಿ-ಧಾರವಾಡ ನಗರಗಳ ಮಧ್ಯೆ ರಾಯಾಪೂರದಲ್ಲಿ ೯ ಸಾಧಾರಣ ಕೊಠಡಿಗಳನ್ನು ನಿರ್ಮಿಸಲು ಕ್ರಮ ಕೈಗೊಳ್ಳಲಾಗುತ್ತಿದೆ.

ಗುಲ್ಬರ್ಗ ಜಿಲ್ಲೆಯ ಸೇಡಂ ತಾಲ್ಲೂಕಿನ ರಸ್ತೆ ಕಾಮಗಾರಿ ಕೆಲಸ

೧೪೦೫ (೧೪೮೯) ಶ್ರೀ ಬಸವಂತರೆಡ್ಡಿ ಮೋತಕಪಲ್ಲಿ (ಸೇಡಂ):- ಮಾನ್ಯ ಲೋಕೋಪಯೋಗಿ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೇ;

ಅ) ಗುಲ್ಬರ್ಗಾ ಜಿಲ್ಲೆಯ ಸೇಡಂ ತಾಲ್ಲೂಕಿನ ಮಲಬೇಡದಿಂದ ಅಡಕಿ ಹುದಾವರೆಗೆ ಕಾರ್ಯ ನಿರ್ವಹಿಸುತ್ತಿದ್ದ ಗುತ್ತಿಗೆದಾರರು ಕೆಲಸವನ್ನು ಸ್ಥಗಿತಗೊಳಿಸಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ?